**All India Radio: Bangalore**
**National Bulletin In Kannada**
**05.06.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.06.2026 1.10 p.m.**

**<><><><>**

ಮುಖ್ಯಾಂಶಗಳು

1. ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಗುಜರಾತ್‌ನ ಸೂರತ್ ಹಾಗೂ ದಾಮನ್‌ಗೆ ಭೇಟಿ; ಹಲವು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
2. ಇಂದು ವಿಶ್ವ ಪರಿಸರ ದಿನ; ಮುಂದಿನ ಪೀಳಿಗೆಗೆ ಭವ್ಯ ಭವಿಷ್ಯ ರೂಪಿಸುವುದು ಪ್ರತಿಯೊಬ್ಬರ ಕರ್ತವ್ಯ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್\ಕರ್ನಾಟಕ ಪ್ರವಾಸದಲ್ಲಿ ಸಚಿವರಾದ ನಿರ್ಮಲಾ ಸೀತಾರಾಮನ್; ವಿಜಯನಗರ ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ಖಾತೆ ಹಂಚಿಕೆ ಬಗ್ಗೆ ಅಸಮಾಧಾನ; ಕರ್ನಾಟಕದ ನೂತನ ಸಚಿವ ರಾಮಲಿಂಗಾ ರೆಡ್ಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ
4. ೧೮ ವರ್ಷ ವಯೋಮಿತಿಯೊಳಗಿನ ಹಾಕಿ ಟೂರ್ನಿ; ಸೆಮಿಫೈನಲ್ಸ್‌ನಲ್ಲಿಂದು ಭಾರತ - ಪಾಕಿಸ್ತಾನ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಗುಜರಾತ್‌ನ ಸೂರತ್ ಮತ್ತು ದಾಮನ್‌ಗೆ ಭೇಟಿ ನೀಡಲಿದ್ದಾರೆ. ಅವರು, ಸುಮಾರು ೨೨ ಸಾವಿರದ ೬೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೊತ್ತದ ಪ್ರಮುಖ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಲೋಕಾರ್ಪಣೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಇದರಲ್ಲಿ ಸಾರಿಗೆ, ಆರೋಗ್ಯ ರಕ್ಷಣೆ, ಕೈಗಾರಿಕಾ ಮೂಲಸೌಕರ್ಯ, ಇಂಧನ, ನಾಗರಿಕ ವಿಮಾನಯಾನ, ಪ್ರವಾಸೋದ್ಯಮ ಮತ್ತು ಸಾಗರ ಸಂಪರ್ಕದ ಪ್ರಮುಖ ಯೋಜನೆಗಳು ಒಳಗೊಂಡಿವೆ. ಪ್ರಧಾನಿಯವರು ಮಧ್ಯಾಹ್ನ ಗುಜರಾತ್‌ಗೆ ಭೇಟಿ ನೀಡಲಿದ್ದು, ಅಲ್ಲಿ ಕೈಗಾರಿಕಾ ಮೂಲಸೌಕರ್ಯಗಳನ್ನು ಪರಿಶೀಲಿಸಿದ ಬಳಿಕ, ಸೂರತ್‌ನಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡುವರು. ಸಂಜೆ ದಾಮನ್‌ಗೆ ಭೇಟಿ ನೀಡಲಿರುವ ಅವರು, ನಮೋ

ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡವನ್ನು ಹಾಗೂ ನಮೋ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸುವರು.

<><><><>

ಇಂದು ಜಗತ್ತಿನಾದ್ಯಂತ ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತಿದೆ. ಭೂಮಿಯ ಮೇಲಿನ ಜೀವ ಉಳಿಸಲು ಜಾಗೃತಿ ಮೂಡಿಸಲು ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮದ ಭಾಗವಾಗಿ ೧೯೭೩ರಿಂದ ಪ್ರತಿ ವರ್ಷ ಜೂನ್ ೫ ರಂದು ಪರಿಸರ ದಿನ ಆಚರಿಸಲಾಗುತ್ತಿದೆ. ವಿಶ್ವ ಪರಿಸರ ದಿನದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ, ಸುಸ್ಥಿರ ಜೀವನ ಮತ್ತು ಜೀವ ವೈವಿಧ್ಯತೆಯ ರಕ್ಷಣೆಗೆ ತಮ್ಮ ಬದ್ಧತೆಯನ್ನು ಬಲಪಡಿಸುವಂತೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ ನೀಡಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತದ ನಾಗರಿಕತೆಯು ತನ್ನ ನಾಗರಿಕರಿಗೆ ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಬದುಕಲು ಬಹಳ ಹಿಂದಿನಿಂದಲೇ ಕಲಿಸಿದೆ. ಮುಂದಿನ ಪೀಳಿಗೆಗೆ ಹಸಿರು, ಆರೋಗ್ಯಕರ ಮತ್ತು ಹೆಚ್ಚು ಸಮೃದ್ಧ ಭವಿಷ್ಯವನ್ನು ನಿರ್ಮಿಸಲು ಪ್ರತಿಯೊಬ್ಬ ನಾಗರಿಕರೂ ಒಟ್ಟಾಗಿ ಕೆಲಸ ಮಾಡಬೇಕೆಂದು ಸಲಹೆ ಮಾಡಿದ್ದಾರೆ. ವಿಶ್ವ ಪರಿಸರ ದಿನದಂದು ಪ್ರಧಾನಿ ನರೇಂದ್ರ ಮೋದಿ ದೇಶವಾಸಿಗಳಿಗೆ ಶುಭಾಶಯ ಕೋರಿದ್ದಾರೆ. ಭಾರತದ ಕೆಲವು ಪ್ರಮುಖ ಯಶಸ್ಸುಗಳಲ್ಲಿ ಹಸಿರು ಹೊದಿಕೆಯನ್ನು ವಿಸ್ತರಿಸುವುದು ಮತ್ತು ಹಲವಾರು ಪ್ರಾಣಿಗಳ ಜನಸಂಖ್ಯೆ ಏರಿಕೆಯೂ ಸಹ ಸೇರಿವೆ. ಸಾಮೂಹಿಕ ಪ್ರಯತ್ನ, ನೀತಿ, ವಿಜ್ಞಾನ ಮತ್ತು ನಾವೀನ್ಯತೆಯಲ್ಲಿ ನಂಬಿಕೆ ಪರಿಸರವನ್ನು ಹೇಗೆ ಸುಧಾರಿಸಬಹುದು ಎಂಬುದನ್ನು ರಾಷ್ಟ್ರದ ಜನ ತೋರಿಸಿದ್ದಾರೆ. ತಾಯಿ ಹೆಸರಿನಲ್ಲಿ ಒಂದು ಗಿಡ ಎಂಬ ಅಭಿಯಾನ ಪ್ರತಿ ವರ್ಷ ಸುಮಾರು ೧.೧೯ ಲಕ್ಷ ಹೆಕ್ಟೇರ್ ಅರಣ್ಯವನ್ನು ವಿಸ್ತರಿಸುವಲ್ಲಿ ಗಮನಾರ್ಹ ಕೊಡುಗೆಗಳನ್ನು ನೀಡಿವೆ. ಹಿಮ ಚಿರತೆಗಳು, ಕರಡಿಗಳು ಮತ್ತು ಚಿರತೆಗಳ ಸಂರಕ್ಷಣಾ ಪ್ರಯತ್ನಗಳು ವನ್ಯಜೀವಿಗಳು ಮತ್ತು ಪರಿಸರ ವ್ಯವಸ್ಥೆಗಳನ್ನು ಪುನಃ ಸ್ಥಾಪಿಸಲು ಸಾಧ್ಯವಾಗಿದೆ. 'ಒಂದು ಭೂಮಿ, ಒಂದು ಕುಟುಂಬ ಮತ್ತು ಒಂದು ಭವಿಷ್ಯ' ತತ್ವದಿಂದ ಮಾರ್ಗದರ್ಶಿಸಲ್ಪಟ್ಟ ಜೀವನ ಅಭಿಯಾನದ ಮೂಲಕ ದೇಶವು ಸ್ವಚ್ಛ, ಹಸಿರು ಮತ್ತು ಹೆಚ್ಚು ಸುಸ್ಥಿರ ಗ್ರಹದತ್ತ ಕೆಲಸ ಮಾಡುವುದನ್ನು ಮುಂದುವರಿಸುತ್ತದೆ ಎಂದು ಪ್ರಧಾನಿ ಒತ್ತಿ ಹೇಳಿದ್ದಾರೆ.

<><><><>

ಕರ್ನಾಟಕ ಪ್ರವಾಸದಲ್ಲಿರುವ ಕೇಂದ್ರ ಹಣಕಾಸು ಮತ್ತು ಸಾಂಸ್ಥಿಕ ವ್ಯವಹಾರಗಳ ಸಚಿವೆ ನಿರ್ಮಲ ಸೀತಾರಾಮನ್ ಅವರು, ಇಂದು ವಿಜಯನಗರ ಜಿಲ್ಲೆ ಹೊಸಪೇಟೆಯ ಟಿ.ಬಿ. ಡ್ಯಾಮ್

ರಸ್ತೆಯ ಜಿಲ್ಲಾಧಿಕಾರಿಗಳ ಕಚೇರಿ ಸಮೀಪ ನಿರ್ಮಾಣವಾಗಲಿರುವ ನೂತನ ರಂಗಮಂದಿರವಾದ ವಿಜಯನಗರ ಜಿಲ್ಲಾ ಸಾಂಸ್ಕೃತಿಕ ಕೇಂದ್ರಕ್ಕೆ ಶಂಕುಸ್ಥಾಪನೆ ನೆರವೇರಿಸಿದರು. ರಂಗಮಂದಿರದ ಪ್ರಧಾನ ವಾಸ್ತು ಶಿಲ್ಪ ವಿನ್ಯಾಸಕಾರರಾದ ಅವಿನ್‌ಎಸ್ ಜೈನ್ ಸಚಿವರಿಗೆ ರಂಗಮಂದಿರದ ಕುರಿತು ಮಾಹಿತಿ ಒದಗಿಸಿದರು. ಈ ಮಂದಿರವು ಮುಕ್ತ ಆಕಾಶ ರಂಗಮಂದಿರ, ಕಲಾ ಗ್ಯಾಲರಿ ಮತ್ತು ಪ್ರದರ್ಶನ ಸಭಾಂಗಣ ಮಿನಿ ಥಿಯೇಟರ್ ಹಾಗೂ ಗ್ರಂಥಾಲಯಗಳನ್ನು ಒಳಗೊಂಡ ಸುಸಜ್ಜಿತ ರಂಗಮಂದಿರವಾಗಿದೆ. ಹಂಪಿಯ ಸುಪ್ರಸಿದ್ಧ ವಾಸ್ತುಶಿಲ್ಪಗಳಾದ ಕಲ್ಲಿನ ರಥ ರಂಗಮಂಟಪ, ಪ್ರವೇಶ ಮಂಟಪ ಗೋಪುರ ಹಂಪಿಯ ವೈಶಿಷ್ಟತೆಗಳನ್ನು ಒಳಗೊಂಡಿದೆ. ವಿಜಯನಗರ ಜಿಲ್ಲಾ ಸಾಂಸ್ಕೃತಿಕ ಕೇಂದ್ರ ಸಂಸದರ ಅನುದಾನದಲ್ಲಿ ನಿರ್ಮಾಣವಾಗುತ್ತಿದೆ.

ಇದೇ ಸಂದರ್ಭದಲ್ಲಿ ಕೇಂದ್ರ ವಿತ್ತ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ವಿಶ್ವ ಪರಿಸರ ದಿನಾಚರಣೆಯ ಸಂದರ್ಭದಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ರಂಗಮಂದಿರದ ಬಳಿ ತಾಯಿ ಹೆಸರಿನಲ್ಲಿ ಗಿಡ ಅಭಿಯಾನದಡಿ ಸಸಿ ನೆಟ್ಟು ನೀರೆರೆದರು.

<><><><>

ಖಾತೆ ಹಂಚಿಕೆ ಬಗ್ಗೆ ಅಸಮಾಧಾನಗೊಂಡಿರುವ ರಾಮಲಿಂಗಾ ರೆಡ್ಡಿ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಜಯನಗರ ಮತ್ತು ಬಿಟಿಎಂ ಲೇಔಟ್ ಕ್ಷೇತ್ರದಿಂದ ಸತತ ೮ ಬಾರಿ ಗೆಲುವು ಸಾಧಿಸಿರುವ ರಾಮಲಿಂಗಾ ರೆಡ್ಡಿ ಅವರಿಗೆ ಭಾರೀ ಮತ್ತು ಮಧ್ಯಮ ನೀರಾವರಿ ಖಾತೆ ನೀಡಲಾಗಿದೆ. ತಮಗೆ ನೀಡಿದ್ದ ಭರವಸೆಯಂತೆ ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಜವಾಬ್ದಾರಿ ನೀಡಿಲ್ಲ. ಆತ್ಮಸಾಕ್ಷಿಗೆ ವಿರುದ್ಧವಾಗಿ ಕೆಲಸ ಮಾಡಲು ತಮಗೆ ಇಷ್ಟವಿಲ್ಲ. ಹೀಗಾಗಿ ಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಶಾಸಕನಾಗಿ ಮುಂದುವರೆಯುತ್ತೇನೆ. ಕಾಂಗ್ರೆಸ್ ಪಕ್ಷದಲ್ಲಿಯೇ ಇರುತ್ತೇನೆ ಎಂದು ರಾಮಲಿಂಗಾ ರೆಡ್ಡಿ ಸ್ಪಷ್ಟಪಡಿಸಿದ್ದಾರೆ. ಅವರ ರಾಜೀನಾಮೆ ಪತ್ರವನ್ನು ಮುಖ್ಯಮಂತ್ರಿಗಳ ಕಾರ್ಯದರ್ಶಿ ಕಚೇರಿಗೆ ತಲುಪಿಸಲಾಗಿದೆ. ಈ ಮಧ್ಯೆ, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ರಾಮಲಿಂಗಾ ರೆಡ್ಡಿ ಪಕ್ಷದ ಹಿರಿಯ ಮತ್ತು ನಿಷ್ಠಾವಂತ ನಾಯಕರಾಗಿದ್ದು, ಅವರ ಜೊತೆ ಪಕ್ಷದ ವರಿಷ್ಠರು ಚರ್ಚೆ ನಡೆಸಿ, ಸಮಸ್ಯೆಯನ್ನು ಬಗೆಹರಿಸಲಿದ್ದಾರೆ ಎಂದು ಹೇಳಿದರು.

<><><><>

ವಿಧಾನಸಭೆಯಿಂದ ರಾಜ್ಯಸಭೆಗೆ ನಡೆಯುವ ದ್ವೈವಾರ್ಷಿಕ ಚುನಾವಣೆಗೆ ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಏಳು ಅಭ್ಯರ್ಥಿಗಳನ್ನು ಕಾಂಗ್ರೆಸ್ ಪ್ರಕಟಿಸಿದೆ. ಈ

ತಿಂಗಳ ೧೮ರಂದು ನಡೆಯಲಿರುವ ಚುನಾವಣೆಗೆ ಕರ್ನಾಟಕದಿಂದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ವಕ್ತಾರ ಪವನ್ ಖೇರಾ ಹಾಗೂ ಮನ್ಸೂರ್ ಅಲಿ ಖಾನ್ ಅವರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಲಾಗಿದೆ. ಮಧ್ಯಪ್ರದೇಶದಿಂದ ಮೀನಾಕ್ಷಿ ನಟರಾಜನ್, ರಾಜಸ್ತಾನದಿಂದ ನೀರಜ್ ಡಾಂಗಿ, ತಮಿಳುನಾಡಿನಿಂದ ಪ್ರವೀಣ್ ಚಕ್ರವರ್ತಿ ಹಾಗೂ ಜಾರ್ಖಂಡ್‌ನಿಂದ ಪ್ರಣವ್ ಝಾ ಅವರು ಅಭ್ಯರ್ಥಿಗಳಾಗಿದ್ದಾರೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ಅಭ್ಯರ್ಥಿಗಳು ಇಂದು ಮಧ್ಯಾಹ್ನ ನಾಮಪತ್ರ ಸಲ್ಲಿಸಲಿದ್ದಾರೆ. ಈ ಸಂದರ್ಭದಲ್ಲಿ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಮತ್ತಿತರ ಕಾಂಗ್ರೆಸ್ ಮುಖಂಡರು ಉಪಸ್ಥಿತರಿರಲಿದ್ದಾರೆ ಎಂದು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ವಿಧಾನಪರಿಷತ್‌ಗೆ ಆಯ್ಕೆ ಮಾಡಿರುವ ನಾಲ್ವರು ಅಭ್ಯರ್ಥಿಗಳು ಸಹ ಇದೇ ಸಂದರ್ಭದಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ. ಏಳು ಸ್ಥಾನಗಳಿಗೆ ನಡೆಯುತ್ತಿರುವ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಐದನೇ ಅಭ್ಯರ್ಥಿಯನ್ನೂ ಸಹ ಕಣಕ್ಕಿಳಿಸಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

<><><>

ಭಾರತೀಯ ರಿಸರ್ವ್ ಬ್ಯಾಂಕ್ ಪ್ರಸಕ್ತ ಹಣಕಾಸು ವರ್ಷದಲ್ಲಿ ಸತತ ಎರಡನೇ ಬಾರಿಗೆ ಬಡ್ಡಿದರಗಳನ್ನು ಯಥಾಸ್ಥಿತಿಯಲ್ಲಿ ಇರಿಸಿದೆ. ಮುಂಬೈನಲ್ಲಿಂದು ಪ್ರಸಕ್ತ ಹಣಕಾಸು ವರ್ಷದ ಎರಡನೇ ದ್ವೈಮಾಸಿಕ ಹಣಕಾಸು ನೀತಿಯನ್ನು ಪ್ರಕಟಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಹಣಕಾಸು ನೀತಿ ಸಮಿತಿ ತಟಸ್ಥ ನಿಲುವಿನೊಂದಿಗೆ ಅಲ್ಪಾವಧಿಯ ಸಾಲ ದರ ಅಥವಾ ರೆಪೊ ದರವನ್ನು ಶೇಕಡ ೫.೨೫ರಲ್ಲಿಯೇ ಉಳಿಸಿಕೊಳ್ಳಲು ಸರ್ವಾನುಮತದಿಂದ ನಿರ್ಧರಿಸಿದೆ ಎಂದು ಹೇಳಿದರು. ಪ್ರಸಕ್ತ ಹಣಕಾಸು ವರ್ಷದಲ್ಲಿ ಜಿಡಿಪಿ ಬೆಳವಣಿಗೆಯ ಮುನ್ಸೂಚನೆಯನ್ನು ಆರ್‌ಬಿಐ ಶೇಕಡ ೬.೯ ರಿಂದ ಶೇಕಡ ೬.೬ಕ್ಕೆ ಇಳಿಸಿದೆ. ಸಿಪಿಐ ಹಣದುಬ್ಬರ ಗುರಿಯನ್ನು ಪ್ರಸಕ್ತ ಹಣಕಾಸು ವರ್ಷದಲ್ಲಿ ಶೇಕಡ ೪.೬ ರಿಂದ ಶೇಕಡ ೫.೧ಕ್ಕೆ ಹೆಚ್ಚಿಸಿದೆ. ಅನಿವಾಸಿ ಭಾರತೀಯರು, ಭಾರತದ ಸಾಗರೋತ್ತರ ನಾಗರಿಕರು ಈಕ್ವಿಟಿ ಸಾಧನಗಳಲ್ಲಿ ಹೂಡಿಕೆ ಮಾಡುವ ಮಿತಿಯನ್ನು ಆರ್‌ಬಿಐ ಹೆಚ್ಚಿಸಿದೆ.

<><><>

ರಾಷ್ಟ್ರೀಯ ಸ್ವಯಂಸೇವಕ ಸಂಘದ ಎರಡನೇ ಸರಸಂಘಚಾಲಕ್ ಮಾಧವ ಸದಾಶಿವರಾವ್ ಗೋಲ್ವಾಲ್ಕರ್ ಅವರ ಪುಣ್ಯತಿಥಿ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಗಲಿದ

ನಾಯಕರಿಗೆ ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅಮಿತ್ ಶಾ ಅವರು, ಗೋಲ್ವಾಲ್ಕರ್ ಸಾಂಸ್ಕೃತಿಕ ರಾಷ್ಟ್ರೀಯತೆಗೆ ಬಲವಾದ ಸೈದ್ಧಾಂತಿಕ ಆಧಾರವನ್ನು ನೀಡಿದ್ದಾರೆ. ರಾಷ್ಟ್ರ ನಿರ್ಮಾಣದ ಸೇವೆಯನ್ನು ದೊಡ್ಡ ಶಕ್ತಿಯಾಗಿ ಸ್ಥಾಪಿಸಿದ್ದಾರೆ. ಅವರ ನಾಯಕತ್ವದಲ್ಲಿ, ಸಂಘವು ರಾಷ್ಟ್ರೀಯ ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಜನರನ್ನು ಜಾಗೃತಗೊಳಿಸಿತು ಮತ್ತು ರಾಷ್ಟ್ರೀಯ ಪ್ರಜ್ಞೆಗೆ ಹೊಸ ಎತ್ತರವನ್ನು ನೀಡಿತು ಎಂದು ಸಚಿವರು ಹೇಳಿದ್ದಾರೆ.

<><><><>

ಜಪಾನ್‌ನ ಕಾಕಮಿಗಹರದಲ್ಲಿ ನಡೆಯುತ್ತಿರುವ ೧೮ ವರ್ಷ ವಯೋಮಿತಿಯೊಳಗಿನ ಏಷ್ಯಾಕಪ್ ಹಾಕಿ ಟೂರ್ನಿಯ ಸೆಮಿಫೈನಲ್ಸ್ ನಲ್ಲಿಂದು ಭಾರತ - ಪಾಕಿಸ್ತಾನ ಮುಖಾಮುಖಿಯಾಗಲಿವೆ. ಚೀನಾದ ತೈಪೆ ವಿರುದ್ಧ ನಿನ್ನೆ ನಡೆದ ಕೊನೆಯ ಲೀಗ್ ಪಂದ್ಯದಲ್ಲಿ ೧೩-೧ ಗೋಲುಗಳ ಭಾರೀ ಅಂತರದಿಂದ ಗೆಲುವು ಸಾಧಿಸಿದ್ದ ಭಾರತ ಇಂದಿನ ಪಂದ್ಯದಲ್ಲೂ ಉತ್ಸಾಹದಿಂದ ಕಣಕ್ಕಿಳಿಯಲು ಸಜ್ಜಾಗಿದೆ. ಈ ಮಧ್ಯೆ ಮಹಿಳಾ ತಂಡ ಕೂಡ ಸೆಮಿಫೈನಲ್ಸ್ ಗೆ ಲಗ್ಗೆ ಇಟ್ಟಿದ್ದು, ಚೀನಾ ವಿರುದ್ಧ ಸೆಣಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>